ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಕನ್ನಡ ದಿನಪತ್ರಿಕೆ

**Monday 31st July 2017**

# 7th Graduation Day Celebration of RVCE-A report



ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳೊಂದಿಗೆ ಡಾ.ಯಜ್ ಮೆದುರಿ, ರಾಷ್ಟ್ರೀಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ.ಎಂ.ಕೆ.ಪಾಂಡುರಂಗ ಶೆಟ್ಟಿ, ಪ್ರಾಂಶುಪಾಲ ಡಾ.ಕೆ.ಎನ್‌.ಸುಬ್ರಹ್ಮಣ್ಯ ಇದ್ದಾರೆ

## 1,077 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ರಾಜರಾಜೇಶ್ವರಿ ನಗರದ ಆರ್‌.ವಿ. ತಾಂತ್ರಿಕ ಮಹಾವಿದ್ಯಾಲಯದ 7ನೇ ಘಟಿಕೋತ್ಸವದಲ್ಲಿ 1,077 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು.

ಅತಿಹೆಚ್ಚು ಅಂಕ ಗಳಿಸಿದ 12 ವಿದ್ಯಾರ್ಥಿಗಳಿಗೆ ಚಿನ್ನದ ಪದಕಗಳನ್ನು ನೀಡಿ ಈ ಸಂದರ್ಭದಲ್ಲಿ ಗೌರವಿಸಲಾಯಿತು.

ಪದವಿ ಪ್ರದಾನ ಮಾಡಿದ ದೆಹಲಿಯ ಬೆನೆಟ್ ವಿಶ್ವವಿದ್ಯಾಲಯದ ಕುಲಪತಿ ಡಾ.ಯಜ್ ಮೆದುರಿ ಮಾತನಾಡಿ, 'ದೇಶದಲ್ಲಿ ಹೆಚ್ಚಿನ ಯುವ ಜನರಿದ್ದು, ಎಲ್ಲ ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸುತ್ತಿದ್ದಾರೆ. ಇದರಿಂದ ದೇಶವು ಪ್ರಗತಿಯತ್ತ ದಾಪುಗಾಲಿಟ್ಟಿದೆ. ಮುಂದಿನ ದಿನಗಳಲ್ಲಿ ವಿಶ್ವದ ಭೂಪಟದಲ್ಲಿ ರಾರಾಜಿಸಲಿದೆ' ಎಂದು ಅವರು ಹೇಳಿದರು.